ನಂ: ಎಎಲ್‌ಎನ್(ಎಸ್‌ಯು)/ಎಸ್.ಆರ್/25/15-16

ಜಿಲ್ಲಾಧಿಕಾರಿಗಳವರ ಕಾರ್ಯಾಲಯ
ಬೆಂಗಳೂರು ಜಿಲ್ಲೆ
ಬೆಂಗಳೂರು, ದಿನಾಂಕ: 05/12/2015

: ಅಧಿಕೃತ ಜ್ಞಾಪನ :

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, **ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸ.ನಂ. 177/2 ರಲ್ಲಿ 0-20 ಗುಂಟೆ** ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀಮತಿ **ರಾಮಕ್ಕ ಕೋಂ ಲೇಟ್ ಗೋವಿಂದಪ್ಪ & ಶ್ರೀ ಜಿ.ಮುಕುಂದ ಬಿನ್ ಗೋವಿಂದಪ್ಪ** ರವರು ಸಲ್ಲಿಸಿರುವ ಅರ್ಜಿಯ ದಿನಾಂಕ: 14/07/2015

ಉಲ್ಲೇಖ:-
1) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 7 ಎಲ್‌ಜಿಪಿ 95 ದಿ: 07-06-1999
2) ಸರ್ಕಾರದ ಸುತ್ತೋಲೆ ಪತ್ರ ಸಂಖ್ಯೆ: ಆರ್.ಡಿ.56 ಎಲ್.ಜಿ.ಪಿ:2008 ದಿನಾಂಕ: 10-9-2008 ಮತ್ತು 24-9-2008
3) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ವರದಿ ಸಂಖ್ಯೆ: ಎ.ಎಲ್.ಎನ್(ಎಸ್)ಸಿಆರ್/201/15-16 ದಿನಾಂಕ: 27/08/2015
4) ಸಹಾಯಕ ನಿರ್ದೇಶಕರು, ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರದ ನಂ: ಬೆಂಅಪ್ರಾ/ನಯೋಸನಿ/ಸಿ.ಎಲ್-791/1041/15-16 ದಿ: 07/11/2015 ಮತ್ತು ವಿಶೇಷ ಅಪರ ಭೂಸ್ವಾಧೀನಾಧಿಕಾರಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರದ ನಂ: ಬೆಂಅಪ್ರಾ/ವಿಅಭೂಸ್ವಾಧೀ/441/15-16, ದಿ: 15/10/2015
5) ಭೂ ಪರಿವರ್ತನಾ ಶುಲ್ಕ ರೂ. 27,225/- ಮತ್ತು ಪೋಡಿ ಶುಲ್ಕ ರೂ. 55/- ಒಟ್ಟು 27,280/-ರೂಗಳನ್ನು, ಚಲನ್ ನಂ. 72 & 73 ರಂತೆ, ದಿನಾಂಕ: 4/12/2015 ರಂದು ಎಸ್.ಬಿ.ಎಂ. ಬೆಂಗಳೂರು ಇಲ್ಲಿ ಅರ್ಜಿದಾರರು ಜಮಾ ಮಾಡಿರುತ್ತಾರೆ.

****

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ಕಲಂ 95(2), 95(4) ಮತ್ತು 95(7)ರ ಷರತ್ತುಗಳು ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994ರ ನಿಯಮ 107(1)ರಂತೆ **ವಾಸದ** ಉದ್ದೇಶಕ್ಕೆ ಎಕರೆ ಒಂದಕ್ಕೆ ರೂ. 54,450/-(ಐವತ್ತ್ನಾಲ್ಕು ಸಾವಿರದ ನಾಲ್ಕುನೂರ ಐವತ್ತು **ರೂಪಾಯಿಗಳು ಮಾತ್ರ**) ಗಳಂತೆ ಅರ್ಜಿದಾರರು ಉಲ್ಲೇಖ (5) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ **ಮೇರೆಗೆ** ಅರ್ಜಿದಾರರಾದ **ಶ್ರೀಮತಿ ರಾಮಕ್ಕ ಕೋಂ ಲೇಟ್ ಗೋವಿಂದಪ್ಪ & ಶ್ರೀ ಜಿ.ಮುಕುಂದ ಬಿನ್** ಗೋವಿಂದಪ್ಪ **ನಂ. 69/1, ಜಾಳಿಮಾವು, ಮೀನಾಕ್ಷಿ ದೇವಸ್ಥಾನದ ಹಿಂಭಾಗ, ಬಿ.ಜಿ. ರಸ್ತೆ, ಬೆಂಗಳೂರು-76** ರವರ ಅರ್ಜಿಯನ್ನು **ಪರಿಗಣಿಸಿ**, ಬೆಂಗಳೂರು ದಕ್ಷಿಣ ತಾಲ್ಲೂಕು, **ಉತ್ತರಹಳ್ಳಿ ಹೋಬಳಿ, ಕೊತ್ತನೂರು** ಗ್ರಾಮದ ಸ.ನಂ. 177/2 ರಲ್ಲಿ 0-20 **ಗುಂಟೆ** ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1 ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ /ಬಿಎಂ.ಆರ್.ಡಿ.ಎ (ಸ್ಥಳೀಯ ಯೋಜನಾ ಪ್ರಾಧಿಕಾರ), ಬಿ.ಐ.ಎ.ಪಿ.ಎ.ಪಿ.ಎ /ಮಾಲಿನ್ಯ ನಿಯಂತ್ರಣ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರರಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2 ಈ ಪರಿವರ್ತಿತ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು, ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು

3 ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿಐಎಪಿಪಿಎ/ಬಿಎಂ.ಆರ್.ಡಿ.ಎ (ಸ್ಥಳೀಯ ಯೋಜನಾ ಪ್ರಾಧಿಕಾರ), ಬಿ.ಎಂ.ಐ.ಸಿ. ಪಿ.ಪಿ.ಎ /ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಪ್ಲಾನಿಗೆ ಅನುಮೋದನೆ ಪಡೆಯದೆ ಪರಭಾರೆ ಮಾಡತಕ್ಕದ್ದು

4 ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ ನಿವೇಶನ , ಖಾಲಿ ಜಾಗ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ /ಬಿ.ಐ.ಎ.ಪಿ.ಎ /ಬಿಎಂ.ಆರ್.ಡಿ.ಎ (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಪಿ.ಎ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ಧಿಷ್ಟ ಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5 ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ ಕಟ್ಟಡಗಳನ್ನು ಸಂಬಂಧಪಟ್ಟ ನೋಂದಾವಣಾಧಿಕಾರಿಗಳಿಂದ/ಉಪನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿಗೆ ಪೂರಾ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದ್ದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6 ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ, ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯಾ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7 ಸದರಿ ಜಮೀನಿಗೆ ಹಾಕು ಫೋಟ್ ಖರಾಬು ಇದ್ದಲ್ಲಿ, ಇದನ್ನು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರಕ್ಕೆ ಕಾಯ್ದಿರಿಸತಕ್ಕದ್ದು. ತಹಶೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8 ಸರ್ಕಾರದ ಆದೇಶ ಸಂಖ್ಯೆ: ಪಿಡಬ್ಲ್ಯೂಡಿ7556-665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ.ಪಿ 1/7(11) 67, ದಿನಾಂಕ: 1.1.1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9 ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರಸೂಸುವ ಹೊಗೆ,ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಯ ಅನುಮತಿ ಹೊಂದಿರತಕ್ಕದ್ದು.

10 ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ/ ರಿಟ್ ಅರ್ಜಿ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11 ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12 ಪರಿಷ್ಕೃತ ಮಾಸ್ಟರ್ ಪ್ಲಾನ್ –2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಪಟ್ಟ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

13 ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿಸಲಾಗುವ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

14 ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮಕೈಗೊಳ್ಳಲಾಗುವುದು. ಅಲ್ಲದೆ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

15 ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತಜ್ಞಾಪನ ಪಡೆದಿರುವುದು ಸ್ಪಷ್ಟಪಟ್ಟಲ್ಲಿ ಪರ್‌ವಾನೆ ರದ್ದುಗೊಳ್ಳುತ್ತದೆ. ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.

16 ಪ್ರಶ್ನಿತ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ, ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

17 ಪ್ರಶ್ನಿತ ಜಾಗದಲ್ಲಿ ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ತೋರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

18 ಸಹಾಯಕ ನಿರ್ದೇಶಕರು, ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ದಿನಾಂಕ: 07/11/2015ರ ಪತ್ರದಲ್ಲಿ ತಿಳಿಸಿರುವ ಷರತ್ತುಗಳಿಗೆ ಒಳಪಟ್ಟಿರುತ್ತದೆ.

: : ಷೆಡ್ಯೂಲ್ ವಿವರ : :

ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, **ಉತ್ತರಹಳ್ಳಿ ಹೋಬಳಿ**, **ಕೊತ್ತನೂರು ಗ್ರಾಮದ** ಸ.ನಂ. 177/2 ರಲ್ಲಿ 0-20 ಗುಂಟೆ ವಿಸ್ತೀರ್ಣದ ವಾಸದ ಉದ್ದೇಶದ ಭೂ ಪರಿವರ್ತಿತ ಜಮೀನಿಗೆ ಚಕ್ಕುಬಂದಿ.

:: ಚೆಕ್ಕುಬಂದಿ ::

| ಸ. ನಂ. | ಪೂರ್ವಕ್ಕೆ | ಪಶ್ಚಿಮಕ್ಕೆ | ಉತ್ತರಕ್ಕೆ | ದಕ್ಷಿಣಕ್ಕೆ |
|---|---|---|---|---|
| 177/2 | ಹುಳಿಮಾವು ಗಡಿ & ಸ.ನಂ. 69ರ ಜಮೀನು | ಇದೇ ಸ.ನಂ.177/2ರ ಉಳಿಕೆ ಜಮೀನು ಮತ್ತು ರಸ್ತೆ | ಇದೇ ಸ.ನಂ.177/2ರ ಉಳಿಕೆ ಜಮೀನು | ರಸ್ತೆ |

ಸಹಿ/-
(ವಿ. ಶಂಕರ್)
ಜಿಲ್ಲಾಧಿಕಾರಿಗಳು
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:-

1) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ರವರಿಗೆ ಮೇಲ್ಕಂಡ ಅಧಿಕೃತ ಜ್ಞಾಪನವನ್ನು ಕಳುಹಿಸುತ್ತಾ, ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2) ಸಹಾಯಕ ನಿರ್ದೇಶಕರು(ದಕ್ಷಿಣ), ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪ ವಿಭಾಗ, ಕೆ.ಜಿ.ರಸ್ತೆ ,ಬೆಂಗಳೂರು
4) ಉಪ ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪ ವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ, ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೋಂದಣಾಧಿಕಾರಿಗಳು, ಉತ್ತರಹಳ್ಳಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6) ಅರ್ಜಿದಾರರಾದ ಶ್ರೀಮತಿ ರಾಮಕ್ಕ ಕೋಂ ಲೇಟ್ ಗೋವಿಂದಪ್ಪ & ಶ್ರೀ ಜಿ.ಮುಕುಂದ ಬಿನ್ ಗೋವಿಂದಪ್ಪ ನಂ. 69/1, ಹುಳಿಮಾವು, ಮೀನಾಕ್ಷಿ ದೇವಸ್ಥಾನದ ಹಿಂಭಾಗ, ಬಿ.ಜಿ. ರಸ್ತೆ, ಬೆಂಗಳೂರು-76 ರವರಿಗೆ ಮಾಹಿತಿಗಾಗಿ.
7) ಕಟ್ಟಿನ ಪ್ರತಿ

ಜಿಲ್ಲಾಧಿಕಾರಿಗಳು
ಬೆಂಗಳೂರು ಜಿಲ್ಲೆ, ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**

ಸಂಖ್ಯೆ :
No. ಬೆಂಅಪ್ರಾ/ನಯೋಆಸ/CON-791/ 1041 /15-16.

ದಿನಾಂಕ :
Date : 07/11/2015

ಇವರಿಗೆ,

ಜಿಲ್ಲಾಧಿಕಾರಿಗಳು,
ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು.
ಮಾನ್ಯರೇ,

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.177/2 ರಲ್ಲಿ 0-20 ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಭೂ ಪರಿವರ್ತನೆ ಕೋರಿ ಶ್ರೀಮತಿ. ರಾಮಕ್ಕ ಕೋಂ ಲೇಟ್ ಗೋವಿಂದಪ್ಪ ಮತ್ತು ಮುಕುಂದ ಜಿ.ಬಿನ್. ಲೇಟ್ ಗೋವಿಂದಪ್ಪ ರವರು ಸಲ್ಲಿಸಿರುವ ಅರ್ಜಿ ಬಗ್ಗೆ.

ಉಲ್ಲೇಖ:- 1. ತಮ್ಮ ಕಛೇರಿ ಪತ್ರದ ಸಂಖ್ಯೆ:ಎಎಲ್ಎನ್(ಎಸ್.ಯು)ಎಸ್.ಆರ್/25/2015-16 ದಿನಾಂಕ:03-09-2015 (ಸ್ವೀಕೃತ ದಿನಾಂಕ:18-09-2015)
2. ಈ ವಿಭಾಗದ ಪತ್ರ ಸಂಖ್ಯೆ, ಬೆಂಅಪ್ರಾ/ನಯೋಆಸ/CON-791/899/14-15. ದಿನಾಂಕ.05/10/2015.
3. ಅರ್ಜಿದಾರರ ಮನವಿ ದಿನಾಂಕ.15-10-2015.
4. ಪ್ರಾಧಿಕಾರದ ಭೂ ಸ್ವಾಧೀನ ವಿಭಾಗದ ಪತ್ರ ಸಂಖ್ಯೆ ಬೆಂಅಪ್ರಾ /ವಿಅಭೂಸ್ವಾಅ /441/2015-16, ದಿನಾಂಕ.15-10-2015.

********

ವಿಷಯಕ್ಕೆ ಸಂಬಂಧಪಟ್ಟಂತೆ ಉಲ್ಲೇಖ (1) ರ ಪತ್ರದಲ್ಲಿನ ಅಂಶವನ್ನು ಅದರಂತೆ ಪರಿಶೀಲಿಸಲಾಗಿ ಸರ್ಕಾರದಿಂದ ದಿನಾಂಕ:25/06/2007 ರಂದು ಅನುಮೋದನೆಗೊಂಡಿರುವ RMP-2015 ರಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.177/2 ರಲ್ಲಿ 0-20 ಗುಂಟೆ ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಅಭಿಪ್ರಾಯ ಕೋರಿರುವುದನ್ನು ಪರಿಶೀಲಿಸಲಾಗಿ, ಅನುಮೋದಿತ ಜೆ.ಪಿ.ನಗರ 8ನೇ ಫೇಸ್, ಬಡಾವಣೆಯಲ್ಲಿ ರಸ್ತೆ ಮತ್ತು ನಿವೇಶನಗಳನ್ನು ಮತ್ತು ಉದ್ಯಾನವನವನ್ನು ವಿಂಗಡಿಸಿದೆ, ಆದ್ದರಿಂದ ಸದರಿ ಪ್ರದೇಶವನ್ನು ಭೂ ಪರಿವರ್ತಿಸುವುದು ಸೂಕ್ತವಲ್ಲವೆಂದು ಉಲ್ಲೇಖ (2) ರಲ್ಲಿ ಅಭಿಪ್ರಾಯ ನೀಡಲಾಗಿತ್ತು.

ಉಲ್ಲೇಖ (2) ರ ಪತ್ರದಲ್ಲಿ ಅರ್ಜಿದಾರರು ಪ್ರಶ್ನಿತ ಜಮೀನು ಸರ್ಕಾರದಿಂದ De Notification ಆಗಿದ್ದು, ಬಿಡಿಎ ಅಭಿಯಂತರರ ಕಛೇರಿಯಿಂದ ಈ ಜಮೀನನ್ನು ಪ್ರಾಧಿಕಾರದ ವಶಕ್ಕೆ ಪಡೆದಿಲ್ಲವೆಂದು ಹಾಗೂ ಈ ಜಮೀನನ್ನು ಪ್ರಾಧಿಕಾರದ ವಶಕ್ಕೆ ಪಡೆಯಲು ನಿರಾಕರಿಸಿರುವುದರಿಂದ ಈ ಜಮೀನನ್ನು ಭೂ ಸ್ವಾಧೀನ ಪ್ರಕ್ರಿಯೆಯಿಂದ ಹೊರಟುಪಡಿಸಿ ಆದೇಶ ಮಾಡಿರುವುದರಿಂದ ಹಾಗೂ ಈಗಾಗಲೇ ಭೂ ಸ್ವಾಧೀನಾಧಿಕಾರಿಗಳಿಂದ ಹಿಂಬರಹವನ್ನು ಪಡೆದಿರುವುದರಿಂದ ಹಾಗೂ ಪ್ರಸ್ತುತ ಸಿಡಿಪಿಯಲ್ಲಿ ವಸತಿ ಉದ್ದೇಶಕ್ಕಾಗಿ ಕಾಯ್ದಿರಿಸಿರುವುದರಿಂದ ಮೇಲ್ಕಂಡ ಜಮೀನಿಗೆ ಭೂ ಪರಿವರ್ತನೆಯ ಸಂಬಂಧ ಅಭಿಪ್ರಾಯ ನೀಡುವಂತೆ ಕೋರಿರುತ್ತಾರೆ.

ಉಲ್ಲೇಖ (3) ರಲ್ಲಿ ಪ್ರಾಧಿಕಾರದ ವಿಶೇಷ ಅಪರ ಭೂ ಸ್ವಾಧೀನಾಧಿಕಾರಿಗಳು ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.177/2 ರಲ್ಲಿಯ 03 ಎಕರೆ 28 ಗುಂಟೆ ಜಮೀನನ್ನು ಪ್ರಾಧಿಕಾರವು ಜೆ.ಪಿ.ನಗರ 8ನೇ ಹಂತ ಬಡಾವಣೆಗಾಗಿ ಭೂ ಸ್ವಾಧೀನ ಪಡೆಯಲು ಅಂತಿಮ ಅಧಿಸೂಚನೆ ಸಂಖ್ಯೆ.ಹೆಚ್.ಯುಡಿ/292/ಎಂಎನ್.ಎಕ್ಸ್/93 ದಿನಾಂಕ.19-10-1994 ರಲ್ಲಿ ಹೊರಡಿಸಲಾಗಿದ್ದು, ಸದರಿ ಜಮೀನಿಗೆ ಯುಡಿಡಿ.31-01-1998 ರಂದು ಐತೀರ್ಪು ರಚಿಸಿ ದಿನಾಂಕ.31-03-1998 ರಂದು ಐತೀರ್ಪು ಅನುಮೋದನೆಯಾಗಿರುತ್ತದೆ.



ಟಿ. ಚೌಡಯ್ಯ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು - 560 020.
T. Chowdaiah Road, Kumarapark West, Bangalore-560 020, Facsimile: 2334 5799, Website: www.bdabangalore.org

ಭೂ ಸ್ವಾಧೀನ ಪ್ರಕ್ರಿಯೆಯನ್ನು ಪ್ರಶ್ನಿಸಿ ಭೂ ಮಾಲೀಕರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ ಸಂಖ್ಯೆ.3518/95 ನ್ನು ದಾಖಲು ಮಾಡಲಾಗಿ, ಈ ಪ್ರಕರಣವನ್ನು ಇನ್ನಿತರ ಪ್ರಕರಣಗಳೊಂದಿಗೆ ವಿಚಾರಣೆ ಮಾಡಿದ ನ್ಯಾಯಾಲಯವು ಈ ಯೋಜನೆಗೆ ಬಿಡಿಎ ಕಾಯ್ದೆ ಕಲಂ 18(3) ರಡಿಯಲ್ಲಿ ಅನುಮೋದನೆ ಪಡೆದಿಲ್ಲವೆಂದು ಅಭಿಪ್ರಾಯಪಟ್ಟು ಅಂತಿಮ ಅಧಿಸೂಚನೆಯನ್ನು ವಜಾಗೊಳಿಸಿ ದಿನಾಂಕ.26-09-1996 ರಂದು ಆದೇಶ ಹೊರಡಿಸಿದ ಹಿನ್ನೆಲೆಯಲ್ಲಿ ಈ ಯೋಜನೆಗೆ ಬಿ.ಡಿ.ಎ. ಕಾಯ್ದೆ ಕಲಂ 18(3) ರಡಿಯಲ್ಲಿ ಅನುಮೋದನೆ ಪಡೆದು ನ್ಯಾಯಾಲಯದಿಂದ ಅಂತಿಮ ಅಧಿಸೂಚನೆ ವಜಾ ಆದ ಪ್ರಕರಣಗಳಿಗೆ ಪುನಃ ಸರ್ಕಾರದಿಂದ ಅಂತಿಮ ಅಧಿಸೂಚನೆ ಸಂಖ್ಯೆ ಯುಡಿಡಿ/434/ಎಂಎನ್‌ಎಕ್ಸ್/97 ದಿನಾಂಕ.12-09-1997 ನ್ನು ಹೊರಡಿಸಲಾಗಿರುತ್ತದೆ.

ತದನಂತರ ಸರ್ಕಾರದ ಆದೇಶ ಸಂಖ್ಯೆ:ಯುಡಿಡಿ/71/ಎಂ.ಎನ್.ಎಕ್ಸ್/2010, ದಿನಾಂಕ.10-05-2010 ರಂದು ಭೂ ಸ್ವಾಧೀನ ಕಾಯ್ದೆ ಕಲಂ 48(1) ರಡಿಯಲ್ಲಿ ಮೇಲ್ಕಂಡ ಸರ್ವೆ 177/2 ರಲ್ಲಿನ ಒಟ್ಟು 03 ಎಕರೆ 28 ಗುಂಟೆ ಪೈಕಿ 0-29 ಗುಂಟೆ ಜಮೀನನ್ನು ಭೂ ಸ್ವಾಧೀನ ಪ್ರಕ್ರಿಯೆಯಿಂದ ಹೊರತುಪಡಿಸಲಾಗಿದೆ ಎಂದು ತಿಳಿಸಿರುತ್ತಾರೆ. (Notification ಪ್ರತಿ ಲಗತ್ತಿಸಿರುತ್ತಾರೆ).

ಮೇಲ್ಕಂಡಂತೆ ಪರಿಶೀಲಿಸಲಾಗಿ ಸರ್ಕಾರದಿಂದ ದಿನಾಂಕ:25/06/2007 ರಂದು ಅನುಮೋದನೆಗೊಂಡಿರುವ RMP-2015 ರಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ.177/2 ರಲ್ಲಿ 0-20 ಗುಂಟೆ ಪ್ರದೇಶವು Residential (Main) ಗಾಗಿ ವರ್ಗೀಕರಿಸಿದೆ, ಹಾಲಿ ರಸ್ತೆಯನ್ನು ಸೂಚಿಸಿದೆ, ಕಟ್ಟಡಗಳನ್ನು ಸೂಚಿಸಿದೆ. ಈ ಜಮೀನಿನಲ್ಲಿ ಖರಾಬು ಜಾಗ ಇದ್ದಲ್ಲಿ ಹೊರತು ಪಡಿಸಿ, ಹಾಲಿ ರಸ್ತೆಯನ್ನು ಹೊರತುಪಡಿಸಿ, ಕಟ್ಟಡ ಪ್ರದೇಶಕ್ಕೆ ಈ ಅಭಿಪ್ರಾಯ ಅನ್ವಯಿಸುವುದಿಲ್ಲವೆಂಬ ಷರತ್ತು ವಿಧಿಸಿ, ಉಳಿಕೆ ಜಾಗವನ್ನು ಸಾರ್ವಜನಿಕ ರಸ್ತೆ ಸಂಪರ್ಕ ಇದ್ದಲ್ಲಿ, ವಾಸದ ಉದ್ದೇಶಕ್ಕೆ ಪರಿಶೀಲಿಸಬಹುದಾಗಿದೆ, ಈ ಜಮೀನು ಪ್ರಾಧಿಕಾರದ ಯಾವುದೇ ಯೋಜನೆಯ ಅಥವಾ ಬಡಾವಣೆಯ ಭಾಗವಾಗಿದ್ದಲ್ಲಿ ಈ ಅಭಿಪ್ರಾಯವು ಅನ್ವಯಿಸುವುದಿಲ್ಲ. ಈ ಜಮೀನಿನಲ್ಲಿ ಹಾಲಿ ಅನಧಿಕೃತ ಬಡಾವಣೆ / ಕಟ್ಟಡಗಳಿದ್ದಲ್ಲಿ ಸಕ್ರಮಗೊಳಿಸಲು ನೀಡಿರುವ ಅಭಿಪ್ರಾಯವಾಗಿರುವುದಿಲ್ಲವೆಂಬ ಷರತ್ತಿಗೊಳಪಟ್ಟಿದೆ. ಆದರೆ ಈ ಪತ್ರವು ಭೂ ಉಪಯೋಗದ ಮಾಹಿತಿ ನೀಡುವ ಪತ್ರ ಮಾತ್ರವಾಗಿದ್ದು, ನಿರಾಕ್ಷೇಪಣಾ ಪತ್ರವಲ್ಲವೆಂದೂ ಹಾಗೂ ಮಾಲೀಕತ್ವದ ದಾಖಲೆಗೆ ಸಂಬಂಧಿಸಿರುವುದಿಲ್ಲವೆಂದೂ ಸಹ ಈ ಮೂಲಕ ತಿಳಿಯಪಡಿಸಿದೆ. ಸರ್ವೆ ನಂ.177/2 ರ ಜಮೀನಿನ ಭೂಸ್ವಾಧೀನತೆಯ ಬಗ್ಗೆ ಪ್ರತ್ಯೇಕವಾಗಿ ಮಾಹಿತಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಭೂಸ್ವಾಧೀನ ವಿಭಾಗದಿಂದ ಪಡೆದು ಹಾಗೂ ಹಾಲಿ ಸಾರ್ವಜನಿಕ ರಸ್ತೆ ಸಂಪರ್ಕ ಇರುವ ಬಗ್ಗೆ ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಿಂದ ದೃಢೀಕರಣ ಪತ್ರ ಪಡೆದ ನಂತರವೇ ಪ್ರಸ್ತಾವನೆಯನ್ನು ಪರಿಶೀಲಿಸುವುದು ಸೂಕ್ತವೆಂದು ಅಭಿಪ್ರಾಯ ನೀಡಲಾಗಿದೆ.

(ಕರಡು ಪತ್ರ ಮಾನ್ಯ ಆಯುಕ್ತರವರಿಂದ ಅನುಮೋದಿಸಲ್ಪಟ್ಟಿದೆ.)

ತಮ್ಮ ವಿಶ್ವಾಸಿ,

7/11/15

ಆಯುಕ್ತರ ಪರವಾಗಿ
ಬೆಂಅಪ್ರಾ, ಬೆಂಗಳೂರು.

ಕರ್ನಾಟಕ ಸರ್ಕಾರ

ನಂ : ಎಎಲ್‌ಎನ್ ಎಸ್‌ಆರ್ [ಎಸ್] 111/2008-09

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ ,
ಬೆಂಗಳೂರು, ದಿನಾಂಕ : 23.10.2008.

## ಅ ಧಿ ಕೃ ತ ಜ್ಞಾ ಪ ನ

ವಿಷಯ : ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹುಳಿಮಾವು ಗ್ರಾಮದ ಸರ್ವೆ ನಂ : 69/1ರಲ್ಲಿ 0-32 ಗುಂಟೆ, ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ, ವಾಸದ ಉದ್ದೇಶಕ್ಕೆ ಭೂ ಪರಿವರ್ತನೆ ಕೋರಿ ಶ್ರೀ ಮಾರುತಿಕುಮಾರ್ ಎ ಬಿನ್ ಅಂಜನಪ್ಪ, ನಂ : 69/1, ಮೀನಾಕ್ಷಿ ದೇವಸ್ಥಾನ ಹಿಂಭಾಗ, ಹುಳಿಮಾವು, ಬನ್ನೇರುಘಟ್ಟ ರಸ್ತೆ, ಬೆಂಗಳೂರು 76 ರವರು ಸಲ್ಲಿಸಿರುವ ಅರ್ಜಿ ದಿನಾಂಕ : 5.2.2008.

ಉಲ್ಲೇಖ :
1. ಸರ್ಕಾರದ ಸುತ್ತೋಲೆ ಸಂಖ್ಯೆ : ಆರ್‌ಡಿ 7 ಎಲ್‌ಜಿಪಿ 1995, ದಿನಾಂಕ : 7.6.1999.
2. ಸರ್ಕಾರದ ಸುತ್ತೋಲೆ ಸಂಖ್ಯೆ : ಆರ್‌ಡಿ 50 ಎಲ್‌ಜಿಪಿ 2008, ದಿನಾಂಕ : 10.9.2008 & 24.9.2008.
3. ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರುರವರ ವರದಿ ನಂ : ಎಎಲ್‌ಎನ್ ಎಸ್‌ಆರ್ 840/2007-08, ದಿನಾಂಕ : 29.3.2008.
4. ಭೂ ಪರಿವರ್ತನಾ ಶುಲ್ಕ ರೂ. 43,560-00 ಹಾಗೂ ಹೋಡಿ -ಶುಲ್ಕ ರೂ. 55-00 ಸೇರಿ ಒಟ್ಟು ರೂ. 43,615-00ಗಳನ್ನು ಚಲನ್ ಸಂಖ್ಯೆ : 73, ದಿನಾಂಕ : 17.9.2008 ರಂತೆ ಖಜಾನೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. [illegible] ಸಮಿತಿ ಸಭೆಯ ನಡವಳಿ ದಿನಾಂಕ : 6.6.2008.

* * * * * *

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95[2], 95[4] ಮತ್ತು 95[7] ರ ಪ್ರಕಾರಗಳು, ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ [ತಿದ್ದುಪಡಿ] ನಿಯಮಗಳು 1994ರ ನಿಯಮ 107[1] ರಂತೆ ಎಕರೆ ಒಂದಕ್ಕೆ ರೂ 54,450-00 [ಐವತ್ತು ನಾಲ್ಕು ಸಾವಿರದ ನಾಲ್ಕು ನೂರ ಐವತ್ತು ರೂ. ಗಳು ಮಾತ್ರ] ಗಳಂತೆ ಅರ್ಜಿದಾರರು ಉಲ್ಲೇಖ [4] ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿ ಚಲನ್‌ನ್ನು ಹಾಜರು ಪಡಿಸಿರುವ ಮೇರೆಗೆ ಅರ್ಜಿದಾರರಾದ ಶ್ರೀ ಮಾರುತಿಕುಮಾರ್ ಎ ಬಿನ್ ಅಂಜನಪ್ಪ, ನಂ : 69/1, ಮೀನಾಕ್ಷಿ ದೇವಸ್ಥಾನ ಹಿಂಭಾಗ, ಹುಳಿಮಾವು, ಬನ್ನೇರುಘಟ್ಟ ರಸ್ತೆ ಬೆಂಗಳೂರು 76 ರವರ ಅರ್ಜಿಯನ್ನು ಪರಿಗಣಿಸಿ ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹುಳಿಮಾವು ಗ್ರಾಮದ ಸರ್ವೆ ನಂ : 69/1 ರಲ್ಲಿ 0-32 ಗುಂಟೆ, ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತಿಸಲಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಪಿ.ಪಿ.ಎ : ಮಾಲಿನ್ಯ ನಿಯಂತ್ರಣಾ ಮಂಡಳಿ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.
2. ಈ ಪರಿವರ್ತಿತ ಜಮೀನನ್ನು ವಾಸದ ಉದ್ದೇಶಕ್ಕೆ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.
3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಪಿ.ಪಿ.ಎ : ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಕಟ್ಟಡ ನಕ್ಷೆಗೆ ಅನುಮೋದನೆ ಪಡೆದು ವ್ಯವಹಾರ ಮಾಡತಕ್ಕದ್ದು.
4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಖಾಲಿ ಜಾಗ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಐ.ಸಿ.ಪಿ.ಪಿ.ಎ : ಮಾಲಿನ್ಯ ನಿಯಂತ್ರಣಾ ಮಂಡಳಿ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯ ಸದರಿ ಉದ್ದೇಶಕ್ಕೆ ಕಾಯ್ದಿರಿಸತಕ್ಕದ್ದು.
5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೇ ನಿವೇಶನಗಳನ್ನು / ಕಟ್ಟಡಗಳನ್ನು ಸಂಬಂಧಪಟ್ಟ ನೋಂದಣಾಧಿಕಾರಿಗಳಿಂದ / ಉಪ ನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ. ಅರ್ಜಿದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದ್ದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.
6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತಿಯ ಒದಗಿಸಿ ಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಈ ಜಮೀನಿಗೆ ತಾನು ಭೂಮಿ ಖರಾಬ್ ಜಮೀನಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 67 ರಂತೆ ಬಿ ಖರಾಬು ವಿಸ್ತೀರ್ಣದ ಜಮೀನು ಇದ್ದಲ್ಲಿ ಆ ಜಮೀನನ್ನು ಇದರಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಲಾಗಿದೆ. ಈ ಖರಾಬು ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವುದೇ ಹಕ್ಕು ಇರುವುದಿಲ್ಲ. ಈ ಬಿ ಖರಾಬಿನ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ತಹಶೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ : ಪಿಡಬ್ಲ್ಯೂಡಿ 7556-661 ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ಸಂಖ್ಯೆ : ಪಿ.ಎಲ್/7(1)67, ದಿನಾಂಕ : 1.1.1966 ರಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯ ಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯ ಭಾಗದಿಂದ 25 ಮೀಟರ್‌ಗಳ ಅಂತರವನ್ನು ಬಿಡತಕ್ಕದ್ದು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿನದಿಂದ ಎರಡು ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.

10. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರಬಿಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ಹತೋಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ / ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

11. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ / ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

12. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

13. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು [illegible] ಮುಂದಿನ ಕ್ರಮ ಕೈಗೊಳ್ಳಲಾಗುವುದು ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು [illegible] ನೀಡದೆ ತೆರವು ಕ್ರಮ ಕೈಗೊಳ್ಳಲಾಗುವುದು ಹಾಗೂ ಅದಕ್ಕೆ ತಗುಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಅರ್ಜಿದಾರರಿಂದ ವಸೂಲಿ ಮಾಡಲಾಗುವುದು.

**ಷೆ ಡ್ಯೂ ಲ್ ವಿ ವ ರ**

ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹುಳಿಮಾವು ಗ್ರಾಮದ ಸರ್ವೆ ನಂ : 69/1 ರಲ್ಲಿ [illegible] ವಿಸ್ತೀರ್ಣಕ್ಕೆ ಭೂ ಪರಿವರ್ತಿತ ಜಮೀನಿಗೆ ಚೆಕ್ಕುಬಂದಿ :

| | | |
|---|---|---|
| ಪೂರ್ವಕ್ಕೆ | : | ಸರ್ವೆ ನಂ : 69/2 & ಸುಬ್ರಮಣ್ಯರವರ ಸ್ವತ್ತು |
| ಪಶ್ಚಿಮಕ್ಕೆ | : | ಕೊತ್ತನೂರು ದಿಣ್ಣೆ ಹಾಗೂ ಲೇಔಟ್ |
| ಉತ್ತರಕ್ಕೆ | : | ಸರ್ವೆ ನಂ : [illegible] ಸರ್ಕಾರಿ ಸ್ವತ್ತು |
| ದಕ್ಷಿಣಕ್ಕೆ | : | ರಸ್ತೆ |

ಸಹಿ/-
[[illegible]]
ವಿಶೇಷ ಜಿಲ್ಲಾಧಿಕಾರಿ (ಕಂದಾಯ),
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ.

1. ತಹಸೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ಮೂಲ ಕಡತ ಹಾಗೂ ನಕ್ಷೆಯೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಗ್ರಾಮದ ಆರ್.ಟಿ.ಸಿ.ಯಲ್ಲಿ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಕಂದಾಯದ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸಲಾಗುವುದು.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3. ಉಪವಿಭಾಗಾಧಿಕಾರಿಗಳು ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು.
4. ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು.
5. ಉಪ ನೋಂದಣಾಧಿಕಾರಿಗಳು, ಬೇಗೂರು ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಅರ್ಜಿದಾರರಾದ ಶ್ರೀ [illegible], ನಂ : 69/1, ಮೀನಾಕ್ಷಿ ದೇವಸ್ಥಾನ ಹಿಂಭಾಗ, ಹುಳಿಮಾವು, ಬನ್ನೇರುಘಟ್ಟ ರಸ್ತೆ, ಬೆಂಗಳೂರು 76. ರವರಿಗೆ ದೃಢೀಕೃತ ಅಂಚೆ ಮೂಲಕ.
7. ಕಚೇರಿ ಪ್ರತಿ.

ವಿಶೇಷ ಜಿಲ್ಲಾಧಿಕಾರಿ (ಕಂದಾಯ),
ಬೆಂಗಳೂರು ಜಿಲ್ಲೆ, ಬೆಂಗಳೂರು.